**"Azadi Ka Amrit Mahotsav"**
**INDIA@75**

**ಕೃಷಿ ವಿಶ್ವ ವಿದ್ಯಾನಿಲಯ**
**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**
**ಜಿ.ಕೆ.ವಿ.ಕೆ., ಬೆಂಗಳೂರು-560065**

*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

---

**ದಿನಾಂಕ:** 20.07.2021

## ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ

### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

### (ದಿನಾಂಕ 21-07-2021 ರಿಂದ 25-07-2021ವರೆಗೆ)

| ನಿಯತಾಂಕಗಳು | 21.07.2021 | 22.07.2021 | 23.07.2021 | 24.07.2021 | 25.07.2021 |
|---|---|---|---|---|---|
| ಮಳೆ (ಮಿ ಮಿ) | 5 | 3 | 7 | 10 | 9 |
| ಗರಿಷ್ಠ ಉಷ್ಣಾಂಶ °(ಡಿ.ಸೆ.) | 28 | 28 | 28 | 28 | 28 |
| ಕನಿಷ್ಠ ಉಷ್ಣಾಂಶ (ಡಿ.ಸೆ.) | 20 | 21 | 21 | 20 | 20 |
| ಮೋಡ (ಪ್ರಮಾಣ) | 7 | 7 | 7 | 8 | 8 |
| ಅರ್ದ್ರತೆ 7.20 ಬೆ (ಶೇ) | 93 | 93 | 93 | 95 | 95 |
| ಅರ್ದ್ರತೆ 2.20 ಮ (ಶೇ) | 88 | 88 | 88 | 90 | 90 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 8 | 9 | 9 | 8 | 7 |
| ಗಾಳಿಯ ದಿಕ್ಕು ( ಡಿಗ್ರಿ) | 288 | 257 | 249 | 248 | 252 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **28.0$^o$C** ಮತ್ತು ಕನಿಷ್ಠ **20.0-21.0$^o$C** ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **93-95 %** ಇದ್ದು ಮಧ್ಯಾಹ್ನ **88-90 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **7-9** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

**"ಆರಿದ್ರದಲ್ಲಿ ಆದಷ್ಟು ಬಿತ್ತು , ಆರಿದ್ರ ಇಲ್ಲದಿದ್ರೆ ದರಿದ್ರ"**

- ಪುಷ್ಯ ನಕ್ಷತ್ರದ ಮಳೆಯ ಕಾಲವು ಜುಲೈ ತಿಂಗಳ 20 ರಿಂದ ಆಗಸ್ಟ್ 02 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 56.4 ಮಿ.ಮೀ. ವರೆಗೆ ಮಳೆಯಾಗುತ್ತದೆ.

---

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| **ಸಾಮಾನ್ಯ** | ➢ ಉತ್ತಮ ಮಳೆಯ ಅವಕಾಶ ಇರುವುದರಿಂದ ತೇವಾಂಶದ ಆಧಾರದಲ್ಲಿ ಮುಂಗಾರು ಬಿತ್ತನೆಯನ್ನು ಮುಂದುವರಿಸಿ.<br>➢ ಈಗಾಗಲೇ ಬಿತ್ತನೆಯಾಗಿರುವ ತೊಗರಿ ಮತ್ತು ಜೋಳದ ಬೆಳೆಗಳಲ್ಲಿ ಮೇಲು ಗೊಬ್ಬರವನ್ನು ಕೊಡಬೇಕು.<br>➢ ಗಾಳಿಯ ವೇಗವು ಹೆಚ್ಚಾಗಿರುವುದರಿಂದ ಬಾಳೆ ಮತ್ತು ಇನ್ನಿತರ ತರಕಾರಿ ಬೆಳೆಗಳಿಗೆ ರಕ್ಷಣೆ ಕೊಡಿ.<br>➢ ಗಾಳಿಯ ವೇಗವು ಹೆಚ್ಚಾಗಿರುವ್ಯದರಿಂದ ಕೃಷಿ ಮತ್ತು ತೋಟಗಾರಿಕಾ ಬೆಳೆಗಳಲ್ಲಿ ಔಷದ ಸಿಂಪಡಣೆಯನ್ನು ಮುಂದೂಡಿ.<br>➢ ಆರ್ಧ್ರತೆ ಹೆಚ್ಚಿರುವುದರಿಂದ ಬಿತ್ತನೆ ಮಾಡಿರುವ ಬೆಳೆಗಳಲ್ಲಿ ಕೀಟ ಹಾಗೂ ರೋಗಗಳು ಹೆಚ್ಚಬಹುದು. ಆದುದರಿಂದ ಬೆಳೆಗಳನ್ನಾಧರಿಸಿ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕು.<br>➢ ಎಲ್ಲೆಲ್ಲಿ ದೀರ್ಘಾವದಿ ಬೆಳೆಗಳು ( ತೊಗರಿ ಮತ್ತು ಹರಳು) ಬಿತ್ತನೆ ಮಾಡಿದಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.<br>➢ ಎಲ್ಲೆಲ್ಲಿ ಶಿಫಾರಿಸಿಗಿಂತ ಹೆಚ್ಚು ಗಿಡಗಳ ಸಂಖ್ಯೆ ಇದೆಯೋ ಅಲ್ಲಿ ಬೆಳೆ ಸಸಿಗಳ ಸಂಖ್ಯೆಯನ್ನು ಕಡಿಮೆಗೊಳಿಸುವುದರಿಂದ ಮಣ್ಣಿನ ತೇವಾಂಶದ ಸದ್ಬಳಕೆ ಮಾಡಿಕೊಳ್ಳಬಹುದು.<br>➢ **ಏಕಬೆಳೆ ಪದ್ದತಿಯಲ್ಲಿ ಈ ಕೆಳಗಿನ ದೀರ್ಘಾವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ತೊಗರಿ : ಟಿ.ಟಿ.ಬಿ-7, ಬಿ.ಆರ್.ಜಿ-1,2,4ಮತ್ತು 5<br>➢ **ಎರಡುಬೆಳೆ ಪದ್ದತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ** |

| | |
|---|---|
| | ನೆಲಗಡಲೆ: ಟಿ.ಎಂ.ವಿ–2, ಜೆ.ಎಲ್–24 ಮತ್ತು ಕೆ.ಸಿ.ಜಿ–6<br>ಮುಸುಕಿನ ಜೋಳ: ಗಂಗಾ–11, ಡೆಕ್ಕನ್–103, ವಿಜಯ ಕಾಂಪ್ರೋಸಿಟ್, ಕಾಂಪ್ರೋಸಿಟ್ ಎನ್.ಎ.ಸಿ–6004,6002, ನಿತ್ಯಶ್ರೀ–ಸಂಕರಣ ತಳಿ.<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1<br>ಹೆಸರು :ಪಿ.ಎಸ್–16, ಪಿ.ಡಿ.ಎಮ್–84, 178 , ಉದ್ದು: ಕರಗಾವ್–3, ಟಿ–9, ರಶ್ಮಿ<br>ನವಣೆ: ಆರ್.ಎಸ್–118, ಕೆ–221–1,ಪಿ.ಎಸ್–4, ಎಸ್.ಐ.ಎ–326<br>ಸಾಮೆ: ಸಿ.ಒ–2, ಪಿ,ಆರ್.ಸಿ–3,ಒ.ಎಲ್.ಎಂ–203<br>ಹಾರಕ: ಪಿ.ಎಸ್.ಸಿ–1, ಜೆ.ಎನ್.ಕೆ–364, ಆರ್.ಬಿ.ಕೆ–155, ಜಿ.ಪಿ.ಯು.ಕೆ–3 |
| **ಮಾವು** | ➢ ಮಾವಿನಲ್ಲಿ ಒತ್ತಾಗಿ ಬೆಳೆದಿರುವ ರೆಂಬೆಗಳನ್ನು ಕತ್ತರಿಸಬೇಕು ಇದರಿಂದ ಸೂರ್ಯನ ಬೆಳಕು ಒಳಬಾಗಕ್ಕೆ ಬೀಳುತ್ತದೆ ಇದರಿಂದ ಒಳಭಾಗದಲ್ಲೂ ಮುಂದಿನ ಬಾರಿ ಹೂ ಮತ್ತು ಕಾಯಿ ಕಚ್ಚುತ್ತವೆ.<br>➢ ಗಿಡಗಳ ಸುತ್ತಲು ಪಾತಿ ಮಾಡಿ, ಶಿಫಾರಸ್ಸು ಮಾಡಿದ ಗೊಬ್ಬರಗಳನ್ನು ಮಳೆಗಾಲ(ಜೂನ್–ಜುಲೈ) ದಲ್ಲಿ ಒದಗಿಸಬೇಕು. ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು. |
| | **ಹೈನುಗಾರಿಕೆ** |
| **ಪಶುಸಂಗೋಪನೆ** | ➢ **ಗಂಟಲು ಬೇನೆ:** ಪ್ರತಿ ವರ್ಷವೂ ಈ ರೋಗ ಮುಂಗಾರು ಮಳೆ ಪ್ರಾರಂಭದಲ್ಲಿ ( ಜೂನ್ ಮತ್ತು ಜುಲೈ) ಉಲ್ಬಣವಾಗುವುದರಿಂದ ಗಂಟಲು ಬೇನೆ ಲಸಿಕೆಯನ್ನು ಮೇ ತಿಂಗಳಿನಲ್ಲಿ ಮಾಡಿಸುವುದು.<br>➢ **ಚಪ್ಪೆ ರೋಗ :** ಈ ರೋಗವು ಬ್ಯಾಕ್ಟೀರಿಯಾದಿಂದ ಹರಡುತ್ತದೆ.<br>ಈ ರೋಗವು ದನ, ಎಮ್ಮೆ, ಕುರಿಗಳಲ್ಲಿ ಹರಡುತ್ತದೆ. ಸಾಮಾನ್ಯವಾಗಿ ಈ ರೊಗವು ಮಳೆಗಾಲದ ಕೊನೆಯಲ್ಲಿ ಕಾಣುತ್ತದೆ. ಚಪ್ಪೆ ರೋಗದ ಲಸಿಕೆಯನ್ನು ಪ್ರತಿ ವರ್ಷವೂ ಜೂನ್/ಜುಲೈ ತಿಂಗಳಲ್ಲಿ ಮಾಡಿಸುವುದು.<br>➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ. |
| ಸಮಗ್ರ ಕೃಷಿ ಪದ್ಧತಿ | ➢ ಮೀನಿನ ಬೇಸಾಯವನ್ನು ಮಳೆ ನೀರಿನ ಕೋಯ್ಲು ಮಾಡಿದ ಕೃಷಿ ಹೊಂಡ, ಚೆಕ್ ಡ್ಯಾಮ್ ಮತ್ತು ನಾಲಾ ಬದುಗಳಲ್ಲಿ ಮೀನಿನ ಮರಿಗಳನ್ನು ಬಿಡಿ. |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಪ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.